<u>ಕರ್ನಾಟಕ ಸರ್ಕಾರ</u>

ನಂ. ಎಎಲ್‌ಎನ್ ಎಸ್‌ಆರ್ (ಎಸ್) 242:01-02

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ 25-2-2002.

<u>ಅಧಿಕೃತ ಜ್ಞಾಪನ</u>

ವಿಷಯ: ಬೆಂಗಳೂರು ಜಿಲ್ಲೆ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ತಲಘಟ್ಟಪುರ ಗ್ರಾಮದ ಸ.ನಂ. 34:2ರಲ್ಲಿ ಒಟ್ಟು 2-02ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂಪರಿವರ್ತನೆ ಕೋರಿ ಶ್ರೀಮತಿ ಎ.ಸಿ.ಹೇಮಲತಾರವರು ಸಲ್ಲಿಸಿರುವ ಅರ್ಜಿ ದಿ:17-11-01.

ಉಲ್ಲೇಖ: ತಹಶೀಲ್ದಾರ್ ಬೆಂಗಳೂರು ದಕ್ಷಿಣ ತಾಲ್ಲೂಕುರವರ ವರದಿ ನಂ. ಎಎಲ್‌ಎನ್ ಎಸ್‌ಆರ್ 109:01-02 ದಿ:22-12-01.

2) ಭೂಪರಿವರ್ತನಾ ಶುಲ್ಕ ರೂ.111623-00 0-02ಗುಂಟೆ ಬಿ ಖರಾಬ್ ಕಿಮ್ಮತ್ತು 20000-00 ಹಾಗೂ ಪೋಡಿ ಶುಲ್ಕ ರೂ.35-00 ಒಟ್ಟು ರೂ.1,31 658-00ಗಳನ್ನು ಚಲನ್ ನಂ.ಎಸ್‌ಎಲ್‌ಆರ್ 263 ದಿ:31-1-02ರಂದು ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.

ooooo

ಕರ್ನಾಟಕ ಭೂಕಂದಾಯ ಅಧಿನಿಯಮ 1964ರ ಕಲಂ 95(2) 95(4) ಮತ್ತು 95(7)ರ ಷರತ್ತುಗಳು ಹಾಗೂ ಷರತ್ತುಗೊಳಪಡಿಸಿ, ಕರ್ನಾಟಕ ಭೂಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ಎಕರೆ ಒಂದಕ್ಕೆ ರೂ.54450-00 (ರೂ.ಐವತ್ತಾಲ್ಕು ಸಾವಿರದ ನಾಲ್ಕುನೂರಾ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ(2)ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀಮತಿ ಎ.ಸಿ.ಹೇಮಲತಾರವರ ಅರ್ಜಿಯನ್ನು ಪರಿಗಣಿಸಿ ಉತ್ತರಹಳ್ಳಿ ಹೋಬಳಿ, ತಲಘಟ್ಟಪುರ ಗ್ರಾಮದ ಸ.ನಂ.34:2ರಲ್ಲಿನ ಒಟ್ಟು 2-02ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1) ಈ ಭೂಮಿಯನ್ನು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಅಭಿವೃದ್ಧಿ ಮಂಡಳಿ:ಸಿಎಂಸಿ:ಟಿಎಂಸಿ: ಗ್ರಾಮಪಂಚಾಯತಿಗಳಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಅಭಿವೃದ್ಧಿ ಮಂಡಳಿ:ಸಿಎಂಸಿ:ಟಿಎಂಸಿ:ಗ್ರಾಮಪಂಚಾಯತಿಗಳಿಂದ ಅನುಮೋದಿಸಿಕೊಂಡು, ಅನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4) ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಅಭಿವೃದ್ಧಿ ಮಂಡಳಿ:ಸಿಎಂಸಿ:ಟಿಎಂಸಿ:ಗ್ರಾಮಪಂಚಾಯತಿಗಳಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ಸ್ವಚ್ಛೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

6) ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 67ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಪ್ರಸ್ತುತ ಭೂಪರಿವರ್ತನೆಗೆ ಒಳಪಟ್ಟಿರುವ ಸ.ನಂ.34:2ರಲ್ಲಿನ ಎ ಖರಾಬ್ ವಿಸ್ತೀರ್ಣ 0-02ಗುಂಟೆಗೆ ಮಾರುಕಟ್ಟೆ

-2

ದರ ಮತ್ತು ಭೂಪರಿವರ್ತನೆ ಶುಲ್ಕ ರೂ.20000-00ಪಾವತಿಸಿಕೊಳ್ಳಲಾಗಿದ್ದು, ವಾಸದ ಉದ್ದೇಶಕ್ಕಾಗಿ ಬಳಸಲು ಭೂಪರಿವರ್ತನೆ ನೀಡಿದೆ. ತಹಸೀಲ್ದಾರರವರು ಈ ಬಾಬ್ತು ಆರ್‌ಟಿಸಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

7) ಸರ್ಕಾರದ ಆದೇಶದ ನಂ. ಪಿಡಬ್ಲ್ಯೂಡಿ 7556-665-ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ1:7(11)67 ದಿ:1-1-1966ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40ಮೀಟರ್‌ಗಳ ಅಂತರವನ್ನು ಹಾಗೂ ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು. ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

8) ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 96ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

## ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ತಲಘಟ್ಟಪುರ ಗ್ರಾಮದ ಸ.ನಂ.34:2ರಲ್ಲಿನ ಒಟ್ಟು 2-02(ಎರಡು ಎಕರೆ ಎರಡು ಗುಂಟೆ ಮಾತ್ರ) ವಿಸ್ತೀರ್ಣಕ್ಕೆ ಭೂಪರಿವರ್ತಿತ ಜಮೀನಿಗೆ ಚಕ್ಕುಬಂದಿ:

ಪೂರ್ವಕ್ಕೆ : ಹನುಮಂತಯ್ಯನವರ ಸ್ವತ್ತು
ಪಶ್ಚಿಮಕ್ಕೆ : ಬೆಂಗಳೂರು ಕನಕಪುರ ರಸ್ತೆ
ಉತ್ತರಕ್ಕೆ : ಹೆಚ್.ಮುನಿರಾಮಯ್ಯನವರ ಜಮೀನು
ದಕ್ಷಿಣಕ್ಕೆ : ಸ.ನಂ.34:3 ವಿ.ವಜ್ರಪ್ಪನವರ ಜಮೀನು.

(ಸಹಿ).
(ಎಸ್.ಎನ್. ನಾಗರಾಜು)
ವಿಶೇಷ ಜಿಲ್ಲಾಧಿಕಾರಿಗಳು (ಕಂ)
ಬೆಂಗಳೂರು ಜಿಲ್ಲೆ.

ಪ್ರತಿಯನ್ನು ಮುಂದಿನ ಸೂಕ್ತಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-

1) ತಹಸೀಲ್ದಾರ್ ಬೆಂಗಳೂರು ದಕ್ಷಿಣ ತಾಲ್ಲೂಕುರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸ.ನಂ. ಭೂಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್‌ಟಿಸಿಯಲ್ಲಿ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂಕಂದಾಯವನ್ನು ಕಡಿಮೆಗೊಳಿಸುವುದು.

2) ಆಯುಕ್ತರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

3) ಉಪವಿಭಾಗಾಧಿಕಾರಿಗಳು ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.

4) ಉಪ ನಿರ್ದೇಶಕರು, ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆ ಬೆಂಗಳೂರು ಉಪವಿಭಾಗ.

5) ಅರ್ಜಿದಾರರಾದ ಶ್ರೀಮತಿ ಎ.ಸಿ.ಹೇಮಲತಾ ಕೋಂ ಎಸ್.ಎಸ್.ಮೂರ್ತಿ, ನಂ.220 37ನೇ ಎ ಕ್ರಾಸ್ 8ನೇ ಬ್ಲಾಕ್ ಜಯನಗರ, ಬೆಂಗಳೂರು-8ರವರಿಗೆ ದೃಢೀಕೃತ ಅಂಚೆ ಮೂಲಕ.

6) ಹೆಚ್ಚಿನ ಪ್ರತಿ.

(ಎಸ್.ಎನ್. ನಾಗರಾಜು)
ವಿಶೇಷ ಜಿಲ್ಲಾಧಿಕಾರಿಗಳು (ಕಂ)
ಬೆಂಗಳೂರು ಜಿಲ್ಲೆ.